ಕರ್ನಾಟಕ ಸರ್ಕಾರ

ಸಂ: ಎಎಲ್‌ಎನ್ (ಜಿಗಣಿ) ಎಸ್‌ಆರ್ 13/14-15

ಜಿಲ್ಲಾಧಿಕಾರಿಗಳವರ ಕಾರ್ಯಾಲಯ,
ಬೆಂಗಳೂರು ಜಿಲ್ಲೆ,
ಬೆಂಗಳೂರು, ದಿನಾಂಕ: 19-2-2015

:- ಅಧಿಕೃತ ಜ್ಞಾಪನ :-

ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಮಾರಗೊಂಡನಹಳ್ಳಿ ಗ್ರಾಮದ ಸರ್ವೆ ನಂ.15/3 ರಲ್ಲಿ 0-19.04 ಗುಂಟೆ ಹಾಗೂ 0-13.04 ಗುಂಟೆ ಒಟ್ಟು 0-32.08 ಗುಂಟೆ ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಭೂ ಪರಿವರ್ತನೆ ಕೋರಿ ಶ್ರೀಮತಿ ಅನೀಸ್ ಅಕ್ತ ಕೋಂ ಎಂ.ಹಸನ್ ಅಲಿ, ನಂ.1696, 2ನೇ ಕ್ರಾಸ್, ವಿ.ವಿ.ನಗರ, ಬೇಗೂರು, ಬೆಂಗಳೂರು ಮತ್ತು ಶ್ರೀಮತಿ ಸುಮಿತ್ರ ಕೋಂ ಟಿ.ಕೆ. ನಾರಾಯಣರೆಡ್ಡಿ, ಪ್ರಶಾಂತ್ ನಿಲಯ, ನಂ.3535, ಹೆಬ್ಬಗೋಡಿ ಗ್ರಾಮ, ಬೊಮ್ಮಸಂದ್ರ ಅಂಚೆ, ಅತ್ತಿಬೆಲೆ ಹೋಬಳಿ, ಆನೇಕಲ್ ತಾಲ್ಲೂಕು ರವರು ಸಲ್ಲಿಸಿರುವ ಅರ್ಜಿ ದಿನಾಂಕ 21-7-2014.

ಉಲ್ಲೇಖ:

1. ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ/7ಎಲ್‌ಜಿಪಿ/95 ದಿನಾಂಕ: 07-06-1999
2. ಸರ್ಕಾರದ ಸುತ್ತೋಲೆ ಪತ್ರ ಸಂಖ್ಯೆ: ಆರ್.ಡಿ.56 ಎಲ್.ಜಿ.ಪಿ.2008 ದಿನಾಂಕ: 10-9-2008 ಮತ್ತು 24-9-2008
3. ತಹಸೀಲ್ದಾರ್, ಆನೇಕಲ್ ತಾಲ್ಲೂಕು ರವರ ವರದಿ ಸಂಖ್ಯೆ ಎ.ಎಲ್.ಎನ್ (ಜೆ)ಸಿಆರ್ 94/13-14 ದಿನಾಂಕ: 6-8-2014
4. ಭೂ ಪರಿವರ್ತನಾ ಶುಲ್ಕ ರೂ.44,241-00 ಮತ್ತು ಪೋಡಿ ಶುಲ್ಕ ರೂ.55-00 ಒಟ್ಟು 44,296-00 ರೂ.ಗಳನ್ನು ಚಲನ್ ನಂ.68 ದಿನಾಂಕ 18-2-2015 ರಂದು ಎಸ್.ಬಿ.ಎಂ. ಆನೇಕಲ್ ಶಾಖೆ ಇಲ್ಲಿ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರ ಪ್ರಾರಂಭಿಕ ಪ್ರಮಾಣ ಪತ್ರ ಸಂ.ಬೆಂಅಪ್ರಾ/ನಯೋಸ/ಸಿಎಲ್‌ಯು-34/3657/2014-15 ದಿನಾಂಕ 2-1-2015 ಮತ್ತು ಸಹಾಯಕ ನಿರ್ದೇಶಕರು (ದಕ್ಷಿಣ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ರವರ ಪತ್ರ ಸಂ.ಬೆಂಅಪ್ರಾ/ಸಯೋಸ/ಸಿಎಲ್-1067/1083/2014-15 ದಿನಾಂಕ 18-11-2014 ಹಾಗೂ ಉಪ ಆಯುಕ್ತರು (ಭೂ.ಸ್ವಾ) ಬೆಂ.ಅ.ಪ್ರಾ, ಬೆಂಗಳೂರು ರವರ ಪತ್ರ ಸಂ.ಬೆಂಅಪ್ರಾ/ ಉಆ(ಭೂಸ್ವಾ)/392/14-15 ದಿನಾಂಕ 5-1-2015

****

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ಕಲಂ 95(2),95(4) ಮತ್ತು 95(7) ರ ಷರತ್ತುಗಳು ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ, ಕರ್ನಾಟಕ ಭೂ ಕಂದಾಯ (ತಿದ್ದುಪಡಿ) ನಿಯಮಗಳು 1994ರ ನಿಯಮ 107(1)ರಂತೆ ವಾಸದ ಉದ್ದೇಶಕ್ಕೆ ಎಕರೆ ಒಂದಕ್ಕೆ ರೂ ರೂ.54,450-00 (ಐವತ್ತನಾಲ್ಕು ಸಾವಿರದ ನಾಲ್ಕುನೂರ ಐವತ್ತು ರೂಪಾಯಿಗಳು ಮಾತ್ರ) ಗಳಂತೆ ಅರ್ಜಿದಾರರು ಉಲ್ಲೇಖ (4) ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿದ ಮೇರೆಗೆ ಅರ್ಜಿದಾರರಾದ ಶ್ರೀಮತಿ ಅನೀಸ್ ಅಕ್ತ ಕೋಂ ಎಂ.ಹಸನ್ ಅಲಿ, ನಂ.1696, 2ನೇ ಕ್ರಾಸ್, ವಿ.ವಿ.ನಗರ, ಬೇಗೂರು, ಬೆಂಗಳೂರು ಮತ್ತು ಶ್ರೀಮತಿ ಸುಮಿತ್ರ ಕೋಂ ಟಿ.ಕೆ. ನಾರಾಯಣರೆಡ್ಡಿ, ಪ್ರಶಾಂತ್ ನಿಲಯ, ನಂ.3535, ಹೆಬ್ಬಗೋಡಿ ಗ್ರಾಮ, ಬೊಮ್ಮಸಂದ್ರ ಅಂಚೆ, ಅತ್ತಿಬೆಲೆ ಹೋಬಳಿ, ಆನೇಕಲ್ ತಾಲ್ಲೂಕು ರವರ ಅರ್ಜಿಯನ್ನು ಪರಿಗಣಿಸಿ ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ, ಮಾರಗೊಂಡನಹಳ್ಳಿ ಗ್ರಾಮದ ಸರ್ವೆ ನಂ.15/3 ರಲ್ಲಿ 0-19.04 ಗುಂಟೆ ಹಾಗೂ 0-13.04 ಗುಂಟೆ ಒಟ್ಟು 0-32.08 ಗುಂಟೆ ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1 ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ /ಬಿಎಂಆರ್‌ಡಿಎ (ಸ್ಥಳೀಯ ಯೋಜನಾ ಪ್ರಾಧಿಕಾರ), ಬಿಬಿಎಂಪಿ/ಬಿಐಎಪಿಪಿಎ /ಮಾಲಿನ್ಯ ನಿಯಂತ್ರಣ ಮಂಡಳಿ ರವರಿಂದ ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾದರಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.

2 ಈ ಪರಿವರ್ತಿತ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕಾಗಿ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು, ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.

3 ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ/ಬಿಎಂಎಪಿಎ/ಬಿಎಂಆರ್‌ಡಿಎ (ಸ್ಥಳೀಯ ಯೋಜನಾ ಪ್ರಾಧಿಕಾರ), ಬಿ.ಎಂ.ಐ.ಸಿ. ಎ.ಪಿ.ಎ /ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಪ್ಲಾನಿಗೆ ಅನುಮೋದನೆ ಪಡೆಯದೆ ಪರಭಾರೆ ಮಾಡತಕ್ಕದ್ದಲ್ಲ.

ಇದಕ್ಕೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಉದ್ಯಾನವನ, ಸಿ.ಎ ನಿವೇಶನ , ಖಾಲಿ ಜಾಗ ಇತ್ಯಾದಿಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ /ಬಿ.ಎಂ.ಎ.ಪಿ.ಎ /ಬಿಎಂ.ಆರ್.ಡಿ.ಎ (ಸ್ಥಳೀಯ ಯೋಜನಾ ಪ್ರಾಧಿಕಾರ) /ಬಿ.ಎಂ.ಐ.ಸಿ.ಎ.ಪಿ.ಎ ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟ ಪಡಿಸಿದ ಅಳತೆಗಳ ರೀತ್ಯಾ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು.

ಸಂಬಂಧಪಟ್ಟ ಪ್ರಾಧಿಕಾರದಿಂದ ಅನುಮೋದಿತ ನಕ್ಷೆ ಪಡೆಯದೆ ನಿವೇಶನಗಳನ್ನು/ ಕಟ್ಟಡಗಳನ್ನು ಸಂಬಂಧಪಟ್ಟ ನೋಂದಾವಣಾಧಿಕಾರಿಗಳಿಂದ/ಉಪನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ, ಅರ್ಜಿದಾರರು ಒಂದು ವೇಳೆ ಭೂ ಪರಿವರ್ತನೆ ಹೊಂದಿರುವ ಜಮೀನಿಗೆ ಹೊರತಾದ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದ್ದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.

6 ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುತ್‌ಶಕ್ತಿ, ನೀರು ಸರಬರಾಜು, ಒಳಚರಂಡಿ ವ್ಯವಸ್ಥೆ ಇತ್ಯಾದಿಗಳನ್ನು ಆರೋಗ್ಯ ನೈರ್ಮಲೀಕರಣ ಹಾಗೂ ಭದ್ರತೆಗಳ ಉದ್ದೇಶದಿಂದ ಎಲ್ಲಾ ಸೌಲಭ್ಯಗಳನ್ನು ಕಾನೂನು ರೀತ್ಯಾ ಒದಗಿಸಿಕೊಡುವುದು ಅರ್ಜಿದಾರರ ಜವಾಬ್ದಾರಿಯಾಗಿರುತ್ತದೆ.

7 ಈ ಜಮೀನಿಗೆ ಹಾದಿ ಮೋಟ್ ಖರಾಬು ಜಮೀನು ಇದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ತಹಶೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8 ಸರ್ಕಾರದ ಆದೇಶ ಸಂಖ್ಯೆ ಪಿಡಬ್ಲ್ಯುಡಿ:7556-665 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ಡಿ.ಪಿ 1/7(II) 67, ದಿನಾಂಕ: 1.1.1966 ರಂತೆ ಸರ್ಕಾರವು ಕಾಲಕಾಲಕ್ಕೆ ನೀಡುವ ಆದೇಶದಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ ರಸ್ತೆಯ ಮಧ್ಯಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9 ಈ ಭೂಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರಸೂಸುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಹಾಗೂ ಪರಿಸರ ಇಲಾಖೆಯ ಅನುಮತಿ ಹೊಂದಿರತಕ್ಕದ್ದು.

10 ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ/ ರಿಟ್ ಅರ್ಜಿ ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

11 ಪ್ರಸ್ತಾವಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟಿದ್ದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

12 ಪ್ರಶ್ನಿತ ಜಾಗದಲ್ಲಿ ಸರ್ಕಾರಿ ಜಮೀನು ವ್ಯಾಪ್ತಿಗೆ ಒಳಪಟ್ಟಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ಕಲಂ 136(3) ರ ಅಡಿ ವಿಚಾರಣೆ ನಡೆಸಿ ಹೊರಡಿಸುವ ತೀರ್ಮಾನಕ್ಕೆ ಒಳಪಟ್ಟಿರುತ್ತದೆ

13 ಪರಿಷ್ಕೃತ ಮಾಸ್ಟರ್ ಪ್ಲಾನ್ -2015 ರಲ್ಲಿ ಸೂಕ್ಷ್ಮ ವಲಯ (Sensitive Zone) ದಲ್ಲಿ ಬರುವ ಪ್ರದೇಶಗಳಿಗೆ ಸಂಬಂಧಪಟ್ಟ ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೇ ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿಯನ್ನು ಕೈಗೊಳ್ಳಬಾರದು.

14 ಉದ್ದೇಶಿತ ಜಾಗದಲ್ಲಿ ಯಾವುದೇ ರೀತಿಯ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಬೇಕಾದಲ್ಲಿ ಪ್ರಾಧಿಕಾರದಿಂದ ರಚಿತವಾದ ಉಪ ಸಮಿತಿಯ ನಿರ್ಣಯದಂತೆ ನಕ್ಷೆಗಳನ್ನು ಅನುಮೋದಿಸಿಕೊಳ್ಳತಕ್ಕದ್ದು.

15 ಪ್ರಶ್ನಿತ ಜಮೀನು ಮಂಜೂರಾದ ಸರ್ಕಾರಿ ಜಮೀನಾಗಿದ್ದಲ್ಲಿ, ತಕ್ಷಣವೇ ಪಕ್ಕ ಪೋಡಿ ಮಾಡಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

16 ಅರ್ಜಿದಾರರು ಯಾವುದೇ ಸಾಕ್ಷ್ಯಗಳನ್ನು ಮರೆ ಮಾಚಿ, ಅನಧಿಕೃತ ದಾಖಲೆಗಳ ಮೇಲೆ ಈ ಅಧಿಕೃತಜ್ಞಾಪನ ಪಡೆದಿರುವುದು ಸ್ಪಷ್ಟವಾದಲ್ಲಿ ಈ ಆದೇಶ ರದ್ದುಗೊಳ್ಳುತ್ತದೆ. ಹಾಗೂ ಇದರಿಂದ ಅರ್ಜಿದಾರರಿಗಾಗಲೀ ಅಥವಾ ಅವರ ಉತ್ತರಾಧಿಕಾರಿಗಳಿಗಾಗಲೀ ಆಗುವ ಯಾವುದೇ ಲುಕ್ಸಾನಿಗೆ ಸರ್ಕಾರವಾಗಲೀ ಅಥವಾ ಈ ಪ್ರಾಧಿಕಾರವಾಗಲೀ ಯಾವುದೇ ರೀತಿಯ ಜವಾಬ್ದಾರರಾಗಿರುವುದಿಲ್ಲ. ಇದರ ಪೂರ್ಣ ಹೊಣೆಗಾರಿಕೆ ಅರ್ಜಿದಾರರದ್ದೇ ಆಗಿರುತ್ತದೆ.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರ ದಿನಾಂಕ 18-11-2014 ರ ಷರತ್ತುಗಳನ್ನು ಪಾಲಿಸತಕ್ಕದ್ದು.

ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮಕೈಗೊಳ್ಳಲಾಗುವುದು. ಅಲ್ಲದೆ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ಕೈಗೊಳ್ಳಲಾಗುವುದು ಹಾಗೂ ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು

:: ಷೆಡ್ಯೂಲ್ ವಿವರ ::

ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಜಿಗಣಿ ಹೋಬಳಿ ಮಾದಗೊಂಡನಹಳ್ಳಿ ಗ್ರಾಮದ ಸರ್ವೆ ನಂ.15/3 ರಲ್ಲಿ 0-19.04 ಗುಂಟೆ ಹಾಗೂ 0-13.04 ಗುಂಟೆ ಒಟ್ಟು 0-32.08 ಗುಂಟೆ ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಭೂ ಪರಿವರ್ತಿತ ಜಮೀನಿನ ಚೆಕ್ಕುಬಂದಿ

| ಸರ್ವೆ ನಂ. | ಪೂರ್ವಕ್ಕೆ | ಪಶ್ಚಿಮಕ್ಕೆ | ಉತ್ತರಕ್ಕೆ | ದಕ್ಷಿಣಕ್ಕೆ |
|---|---|---|---|---|
| 15/3 | ಇದೇ ಸರ್ವೆ ನಂಬರ್‌ನ ಉಳಿಕೆ | ಲಾ ಸ ನಂ.14 | ಲಾ ಹಿ ನಂ.15/2 | ರಸ್ತೆ |

ಸಹಿ/-
(ವಿ. ಶಂಕರ್)
ಜಿಲ್ಲಾಧಿಕಾರಿಗಳು
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ:-

1) ತಹಸೀಲ್ದಾರ್, ಆನೇಕಲ್ ತಾಲ್ಲೂಕು ರವರಿಗೆ ಮೇಲ್ಕಂಡ ಅಧಿಕೃತ ಜ್ಞಾಪನ ಮತ್ತು ಚಲನ್ ಹಾಗೂ ಕರಾರು ಪತ್ರದೊಂದಿಗೆ ಕಳುಹಿಸುತ್ತಾ, ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಗಣಕೀಕೃತ ಆರ್.ಟಿ.ಸಿಯಲ್ಲಿ ಕೂಡಲೇ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೆದಾರರ ಲೆಕ್ಕದಲ್ಲಿ ಸದರಿ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸತಕ್ಕದ್ದು
2) ಆಯುಕ್ತರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬಳ್ಳಾರಿ ರಸ್ತೆ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3) ಉಪವಿಭಾಗಾಧಿಕಾರಿಗಳು, ಬೆಂಗಳೂರು ದಕ್ಷಿಣ ಉಪ ವಿಭಾಗ, ಬೆಂಗಳೂರು
4) ಉಪ ನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪ ವಿಭಾಗ, ಬೆಂಗಳೂರು ಇವರಿಗೆ ಆರ್.ಟಿ.ಸಿ. ಹಾಗೂ ನಕ್ಷೆಯ ಪ್ರತಿಯೊಂದಿಗೆ ಕಳುಹಿಸುತ್ತಾ, ಭೂ ಪರಿವರ್ತನಾ ಪೋಡಿ ಕಾರ್ಯವನ್ನು ಜರೂರಾಗಿ ಪೂರೈಸಲು ಸೂಚಿಸಿದೆ.
5) ರಾಜಸ್ವ ನಿರೀಕ್ಷಕರು, ಜಿಗಣಿ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ
6) ಅರ್ಜಿದಾರರಾದ ಶ್ರೀಮತಿ ಅನೀಸ್ ಬದ್ರ ಕೋಂ ಎಂ.ಜಹೀರ್ ಅಲಿ, ನಂ.1696, 2ನೇ ಕ್ರಾಸ್, ವಿ.ಪಿ.ನಗರ, ಬೇಗೂರು, ಬೆಂಗಳೂರು ಮತ್ತು ಶ್ರೀಮತಿ ಸುಮಿತ್ರ ಕೋಂ ಟಿ.ಕೆ. ಸದಾಶಿವರೆಡ್ಡಿ, ಪ್ರಶಾಂತ್ ನಿಲಯ, ನಂ.3535, ಹೆಬ್ಬಗೋಡಿ ಗ್ರಾಮ, ಬೊಮ್ಮಸಂದ್ರ ಅಂಚೆ, ಅತ್ತಿಬೆಲೆ ಹೋಬಳಿ, ಆನೇಕಲ್ ತಾಲ್ಲೂಕು ರವರಿಗೆ ಮಾಹಿತಿಗಾಗಿ.
7) ಕಛೇರಿ ಪ್ರತಿ

ಜಿಲ್ಲಾಧಿಕಾರಿಗಳು,
ಬೆಂಗಳೂರು ಜಿಲ್ಲೆ, ಬೆಂಗಳೂರು.